**Akashvani : Bangalore**
**Regional Bulletin In Kannada**
**13.09.2024 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**13.09.2024 / 14.30  hrs**

**<><*<><>*><>**

ಮುಖ್ಯಾಂಶಗಳು

**<><*<><>*><>**

**೧. ದೇಶದಲ್ಲಿ ಹೊಸದಾಗಿ ೧೩ ವಂದೇ ಭಾರತ್ ರೈಲುಗಳ ಸಂಚಾರಕ್ಕೆ ಚಾಲನೆ ನೀಡಲಿರುವ ಪ್ರಧಾನಿ - ಕೇಂದ್ರ ಸಚಿವ ವಿ.ಸೋಮಣ್ಣ**

**೨. ನಾಗಮಂಗಲ ಗಣೇಶ ಮೆರವಣಿಗೆ ಗಲಭೆ ಪ್ರಕರಣ; ಕಠಿಣ ಕ್ರಮಕ್ಕೆ ಗೃಹ ಸಚಿವ ಪರಮೇಶ್ವರ್ ತಾಕೀತು**

**೩. ಯಾವುದೇ ಆಸ್ತಿಯ ನೋಂದಣಿ ಸಮಯದಲ್ಲಿ ಇ-ಖಾತಾ ಕಡ್ಡಾಯ**

**೪. ಬಿಬಿಎಂಪಿಗೆ ೬೮ ಕೋಟಿ ರೂಪಾಯಿ ವಂಚನೆ ಆರೋಪ; ಮುಖ್ಯಮಂತ್ರಿ ವಿರುದ್ಧ ಖಾಸಗಿ ದೂರು ದಾಖಲು**

**<><*<><>*><>**

ದೇಶದಲ್ಲಿ ಹೊಸದಾಗಿ ೧೩ ವಂದೇ ಭಾರತ್ ರೈಲುಗಳ ಸಂಚಾರಕ್ಕೆ ಚಾಲನೆ ನೀಡಲಾಗುವುದು ಎಂದು ಕೇಂದ್ರ ರೈಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಡವರು ಹಾಗೂ ಶ್ರೀಸಾಮಾನ್ಯರಿಗೆ ನೆರವಾಗಲೆಂದು ದೇಶದ ವಿವಿಧ ರಾಜ್ಯಗಳಲ್ಲಿ ವಂದೇ ಭಾರತ್ ರೈಲುಗಳಿಗೆ ಚಾಲನೆ ದೊರೆಯಲಿದೆ. ಇದೇ ೧೫ರಂದು ೬ ರೈಲುಗಳು ಹಾಗೂ ಇದೇ ೧೬ರಂದು ಉಳಿದ ೭ ರೈಲುಗಳಿಗೆ ಚಾಲನೆ ಸಿಗಲಿದೆ ಎಂದು ಹೇಳಿದ್ದಾರೆ.

**ಧ್ವನಿ: ವಿ.ಸೋಮಣ್ಣ**

ಇದೇ ವೇಳೆ ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ನಡೆದ ಗಲಭೆ ಕುರಿತು ಪ್ರತಿಕ್ರಿಯಿಸಿದ ವಿ.ಸೋಮಣ್ಣ, ಈ ಕೃತ್ಯದಿಂದ ಸಮಾಜದ ಸ್ವಾಸ್ಥ್ಯ ಹಾಳಾಗಲಿದೆ. ಕೂಡಲೇ ಗೃಹ ಸಚಿವರು ಸ್ಥಳಕ್ಕೆ ಭೇಟಿ ನೀಡಿ ಕಾನೂನು ಸುವ್ಯವಸ್ಥೆಯೊಂದಿಗೆ ಶಾಂತಿ ಕಾಪಾಡಲು ಮುಂದಾಗಬೇಕು ಎಂದು ಆಗ್ರಹಿಸಿದರು. ಸಿಜೆಐ ಡಿ.ವೈ.ಚಂದ್ರಚೂಡ್ ಅವರ ನಿವಾಸಕ್ಕೆ ಪ್ರಧಾನಿ ನರೇಂದ್ರ ಮೋದಿ ಅವರು ತೆರಳಿ ಗಣಪತಿ ಪೂಜೆಯಲ್ಲಿ ಪಾಲ್ಗೊಂಡಿರುವುದಕ್ಕೆ ರಾಜಕೀಯ ಬಣ್ಣ ಬೆರೆಸುವುದು ತರವಲ್ಲ ಎಂದು ಅವರು ಹೇಳಿದರು.

**<><*<><>*><>**

ನಾಗಮಂಗಲ ಗಣೇಶ ಮೆರವಣಿಗೆ ವೇಳೆ ಉಂಟಾದ ಗಲಭೆಗೆ ಸಂಬಂಧಿಸಿದಂತೆ ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಿದ ಪೊಲೀಸ್ ಇನ್ಸ್‌ಪೆಕ್ಟರ್ ಅಶೋಕ್ ಕುಮಾರ್‌ರನ್ನು ಅಮಾನತುಗೊಳಿಸಲಾಗಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗಣೇಶ ಮೆರವಣಿಗೆ ಹೊರಡಬೇಕಿದ್ದ ದಾರಿಯನ್ನು ಮುಂಚಿತವಾಗಿ ಗುರುತಿಸಲಾಗಿತ್ತು. ಇದನ್ನು ಇನ್ಸ್‌ಸ್ಪೆಕ್ಟರ್ ಬದಲಾಯಿಸಿದ್ದರು. ಡಿವೈಎಸ್‌ಪಿ ವಿರುದ್ಧವೂ ತನಿಖೆ ನಡೆಯುತ್ತಿದೆ. ಘಟನೆಗೆ ಕಾರಣಗಳೇನು ಎಂಬುದರ ಕುರಿತು ವರದಿ ನೀಡುವಂತೆ ಸೂಚಿಸಲಾಗಿದೆ. ವರದಿ ಬಂದ ನಂತರ ಮುಂದಿನ ಕ್ರಮ ಜರುಗಿಸಲಾಗುವುದು ಎಂದು ಹೇಳಿದರು. ಪೂರ್ವಯೋಜಿತ ಘಟನೆ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿದ ಡಾ. ಜಿ.

ಪರಮೇಶ್ವರ್, ಯಾವ ಸರ್ಕಾರನೂ ಗಲಾಟೆ ಮಾಡಿ ಎಂದು ಪ್ರಚೋದಿಸುವುದಿಲ್ಲ. ರಾಜ್ಯದಲ್ಲಿ ಯಾರು ಕೂಡ ಕಾನೂನನ್ನು ಕೈಗೆತ್ತಿಕೊಳ್ಳಲು ಬಿಡುವುದಿಲ್ಲ. ಕಾನೂನು ಚೌಕಟ್ಟಿನಲ್ಲಿ ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುವುದು ಎಂದು ಸ್ಪಷ್ಟಪಡಿಸಿದರು. ಇನ್ನೊಂದೆಡೆ, ಘಟನಾ ಸ್ಥಳಕ್ಕೆ ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ಭೇಟಿ ನೀಡಿ, ದಾಳಿಗೆ ತುತ್ತಾದ ಅಂಗಡಿ ಮಳಿಗೆಗಳನ್ನು ವೀಕ್ಷಿಸಿದರು. ಜೊತೆಗೆ ಮಾಲೀಕರಿಗೆ ಸಾಂತ್ವನ ಹೇಳಿದರು. ಘಟನೆಗೆ ಸಂಬಂಧಿಸಿದಂತೆ ಅಧಿಕಾರಿಗಳಿಂದ ಮಾಹಿತಿ ಪಡೆದು, ಮುಂದೆ ಇಂತಹ ಘಟನೆ ನಡೆಯದಂತೆ ಕ್ರಮ ವಹಿಸಬೇಕು ಹಾಗೂ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳುವಂತೆ ಅವರು ಸೂಚಿಸಿದರು.

<><*<><>*><>

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಇದೇ ೧೫ ರಂದು ದಾವಣಗೆರೆ ಜಿಲ್ಲೆಯಲ್ಲಿ ಹಮ್ಮಿಕೊಂಡಿರುವ ೮೦ ಕಿಲೋಮೀಟರ್ ಉದ್ದದ ಮಾನವ ಸರಪಳಿಯಲ್ಲಿ ೭೦ ಸಾವಿರ ಜನರು ಭಾಗವಹಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೧೦ ಗ್ರಾಮ ಪಂಚಾಯಿತಿಗಳು, ಎರಡು ಸ್ಥಳೀಯ ಸಂಸ್ಥೆಗಳು, ೨೫ ಗ್ರಾಮಗಳ ವ್ಯಾಪ್ತಿಯಲ್ಲಿ ಮಾನವ ಸರಪಳಿ ಹಾದು ಹೋಗಲಿದೆ. ೮೦ ಕಿಲೋಮೀಟರ್ ಉದ್ದದ ಮಾನವ ಸರಪಳಿ ಕಾರ್ಯದಲ್ಲಿ ಶಾಲಾ ಮಕ್ಕಳು, ಸಾರ್ವಜನಿಕರು, ಸರ್ಕಾರಿ ನೌಕಕರು ಭಾಗವಹಿಸಲಿದ್ದಾರೆ ಎಂದು ಹೇಳಿದರು. ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಭಾವನೆಯನ್ನು ಬೆಳೆಸುವಂತಹ ಪ್ರಜಾಪ್ರಭುತ್ವ ದಿನವನ್ನು ಯಶಸ್ವಿಯಾಗಿ ಆಚರಿಸಲಾಗುತ್ತಿದೆ ಎಂದು ಕೋಲಾರದ ಜಿಲ್ಲಾಧಿಕಾರಿ ಅಕ್ರಂ ಪಾಷ ತಿಳಿಸಿದ್ದಾರೆ. ರಾಜ್ಯ ಸರ್ಕಾರ ಬೀದರ್‌ನಿಂದ ಚಾಮರಾಜನಗರದವರೆಗೆ ಸುಮಾರು ೨ ಸಾವಿರದ  ೫೦೦ ಕಿಲೋಮೀಟರ್ ಮಾನವ ಸರಪಳಿ ರಚನೆ ಮಾಡುತ್ತಿದೆ. ಇದರ ಅಂಗವಾಗಿ ಕೋಲಾರ ಜಿಲ್ಲೆಯಲ್ಲಿ ಸುಮಾರು ೫೫ ಕಿಲೋಮೀಟರ್ ಮಾನವ ಸರಪಳಿಯನ್ನು ರಚನೆ ಮಾಡಲಾಗುತ್ತಿದೆ ಎಂದರು.

<><*<><>*><>

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ಶಿವನ ಸಮುದ್ರದಲ್ಲಿ ಜಿಲ್ಲಾಡಳಿತದ ವತಿಯಿಂದ ನಾಳೆಯಿಂದ ಎರಡು ದಿನಗಳ ಕಾಲ ಗಗನಚುಕ್ಕಿ ಜಲಪಾತೋತ್ಸವ ನಡೆಯಲಿದೆ.  ನಾಳೆ ಸಂಜೆ ಆರು ಗಂಟೆಗೆ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಲಿದ್ದಾರೆ. ಶನಿವಾರ ಮತ್ತು ಭಾನುವಾರ ಬೆಳಗ್ಗೆ ೧೧ ಗಂಟೆಯಿಂದ ರಾತ್ರಿ ೧೧ ಗಂಟೆವರೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ರಾತ್ರಿ ವೇಳೆ ಲೇಸರ್ ಲೈಟಿಂಗ್ ಪ್ರದರ್ಶನ ವ್ಯವಸ್ಥೆ ಮಾಡಲಾಗಿದೆ ಎಂದು ಶಾಸಕ ಪಿ.ಎಂ.ನರೇಂದ್ರಸ್ವಾಮಿ ತಿಳಿಸಿದ್ದಾರೆ.

<><*<><>*><>

ಸ್ವತ್ತುಗಳ ನೋಂದಣಿ ವೇಳೆ ಸಾರ್ವಜನಿಕರು ಮೋಸ ಹೋಗುವುದನ್ನು ತಡೆಯಲು ಆಸ್ತಿ ಖರೀದಿದಾರರನ್ನು ದುಷ್ಕೃತ್ಯಗಳಿಂದ ರಕ್ಷಿಸುವ ಉದ್ದೇಶದಿಂದ ಇ-ಖಾತಾ ವ್ಯವಸ್ಥೆ ಜಾರಿಗೆ ತರಲಾಗಿದೆ ಎಂದು ಬಿಡಿಎ ಆಯುಕ್ತ ಎನ್.ಜಯರಾಮ್ ಹೇಳಿದ್ದಾರೆ.  ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ-ಬಿಡಿಎ ಅಥವಾ ಅದರ ಅನುಮೋದಿತ ಖಾಸಗಿ ಲೇಔಟ್‌ಗಳಿಗೆ ಸೇರಿದ ಆಸ್ತಿಯನ್ನು ಒಳಗೊಂಡ ಯಾವುದೇ ಆಸ್ತಿಯ ನೋಂದಣಿ ಸಮಯದಲ್ಲಿ ಇ-ಖಾತಾ ಕಡ್ಡಾಯ ಮಾಡಲಾಗಿದೆ. ನಗರದಲ್ಲಿ ಸರಿಸುಮಾರು ೧.೫ ಲಕ್ಷ ಆಸ್ತಿಗಳು ಬಿಡಿಎ ನಿಯಂತ್ರಣಕ್ಕೊಳಪಟ್ಟಿವೆ. ಇ-ಖಾತಾ ಆಸ್ತಿ ಗುರುತಿನ ಸಂಖ್ಯೆಯಾಗಿದ್ದು, ಅದು ಮಾಲೀಕರಿಗೆ ಆಸ್ತಿಯ ಅಂತಿಮ ಮಾಲೀಕತ್ವವನ್ನು ನೀಡುತ್ತದೆ. ಇದುವರೆಗೆ ಬಿಡಿಎ ಆಸ್ತಿಗಳಿಗೆ ಮಾಲೀಕತ್ವದ ಬಗ್ಗೆ ಕೈಪಿಡಿ ಪ್ರಮಾಣಪತ್ರವು ಚಾಲ್ತಿಯಲ್ಲಿತ್ತು ಎಂದರು. ಇ-ಖಾತಾದಿಂದ ಮಾತ್ರ ಸ್ವತ್ತಿನ ಸ್ವರೂಪ ಮತ್ತು ನೈಜ ಮಾಲೀಕರ ಗುರುತು ಸಾಧ್ಯವಾಗುತ್ತದೆ. ನಕಲಿ ದಾಖಲೆ ಸೃಷ್ಟಿಸುವವರಿಗೆ ಕಡಿವಾಣ ಬೀಳಲಿದ್ದು, ಖರೀದಿದಾರರಿಗೂ ಅಸಲಿ ಮಾಲೀಕರ ಗುರುತು ಸಿಗಲಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.  ಇ-ಖಾತಾ ವಿಶಿಷ್ಟ ಗುರುತಿನ ಸಂಖ್ಯೆಯನ್ನು ಒದಗಿಸುತ್ತದೆ. ಮುದ್ರಾಂಕ ಮತ್ತು ನೋಂದಣಿ ಇಲಾಖೆಯ ಕಾವೇರಿ-೨ ಸಾಫ್ಟ್‌ವೇರ್ ಅಡಿಯಲ್ಲಿ ಯಾವುದೇ ದಾಖಲೆಯನ್ನು ನೋಂದಾಯಿಸುವಾಗ ಸಂಖ್ಯೆಯನ್ನು ಕೇಳುತ್ತದೆ. ಆಸ್ತಿಯ ಮಾಲೀಕತ್ವಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿಗಳನ್ನು ಟ್ರ್ಯಾಕ್

ಮಾಡಲು ಸಹಾಯ ಮಾಡುತ್ತದೆ. ಎರಡೆರೆಡು ಬಾರಿ ನೋಂದಣಿ, ಮೋಸದ ವಹಿವಾಟುಗಳು ಮತ್ತು ಎಲ್ಲಾ ರೀತಿಯ ದುಷ್ಕೃತ್ಯಗಳು ಇದರಿಂದ ಬಯಲಾಗುತ್ತವೆ. ಅಕ್ರಮ ಲೇಔಟ್‌ಗಳನ್ನು ಸುಲಭವಾಗಿ ಪತ್ತೆ ಹಚ್ಚಲು ಇದು ಸಹಾಯ ಮಾಡುತ್ತದೆ ಎಂದು ಬಿಡಿಎ ಉನ್ನತ ಕಂದಾಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆದಾಗ್ಯೂ, ಸಾರ್ವಜನಿಕರು ತಮ್ಮ ಹಸ್ತಚಾಲಿತ ಪ್ರಮಾಣಪತ್ರಗಳನ್ನು ಇ-ಖಾತಾ ಆಗಿ ಪರಿವರ್ತಿಸುವ ಅಗತ್ಯವಿಲ್ಲ. ಏಕೆಂದರೆ ಇವುಗಳು ಇನ್ನೂ ಕಾನೂನುಬದ್ಧ ದಾಖಲೆಗಳಾಗಿ ಉಳಿದಿವೆ. ಆಸ್ತಿ ವರ್ಗಾವಣೆ, ಗಿಫ್ಟ್ ಡೀಡ್ ಮತ್ತು ಮುಂತಾದವುಗಳನ್ನು ಒಳಗೊಂಡ ಸಬ್-ರಿಜಿಸ್ಟ್ರಾರ್ ಕಚೇರಿಯಲ್ಲಿ ಯಾವುದೇ ವಹಿವಾಟು ನಡೆಸಬೇಕಾದಾಗ ಮಾತ್ರ ಇ-ಖಾತಾ ಅಗತ್ಯವಾಗಿರುತ್ತದೆ ಎಂದು ಅವರು ಹೇಳಿದರು.

**<><*<><>*><>**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ-ಬಿಬಿಎಂಪಿಗೆ ೬೮ ಕೋಟಿ ರೂಪಾಯಿ ವಂಚನೆ ಮಾಡಲಾಗಿದೆ ಎಂದು ಆರೋಪಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಇತರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಅನುಮತಿ ನೀಡುವಂತೆ ಕೋರಿ ಬಿಜೆಪಿಯ ಹಿರಿಯ ಮುಖಂಡ ಹಾಗೂ ಆರ್‌ಟಿಐ ಕಾರ್ಯಕರ್ತರಾದ ಎನ್.ಆರ್.ರಮೇಶ್, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಖಾಸಗಿ ದೂರು ಸಲ್ಲಿಸಿದ್ದಾರೆ. ಇಂಧನ ಸಚಿವ ಕೆ.ಜೆ.ಜಾರ್ಜ್, ಸರ್ಕಾರದ ಅಂದಿನ ಪ್ರಧಾನ ಕಾರ್ಯದರ್ಶಿಗಳಾದ ಲಕ್ಷ್ಮೀನಾರಾಯಣ, ಮೇಜರ್ ಪಿ.ಮಣಿವಣ್ಣನ್ ಮತ್ತು ಬಿಬಿಎಂಪಿ ಆಯುಕ್ತ ಮಂಜುನಾಥ್ ಪ್ರಸಾದ್ ಮತ್ತಿತರರು ಈ ಪ್ರಕರಣದಲ್ಲಿ ಕಕ್ಷಿದಾರರಾಗಿದ್ದಾರೆ. ೨೦೧೩-೨೦೧೮ರ ಅವಧಿಯಲ್ಲಿ ಸಿದ್ದರಾಮಯ್ಯ ಸರಕಾರದ ವಿರುದ್ಧ ಭ್ರಷ್ಟಾಚಾರ ನಿಗ್ರಹ ದಳ-ಎಸಿಬಿ ಮತ್ತು ಲೋಕಾಯುಕ್ತ ಸಂಸ್ಥೆಗಳಿಗೆ ದೂರು ನೀಡಲಾಗಿತ್ತು. ಬಿಬಿಎಂಪಿ ಒಡೆತನದ ೪೯೩ ಬಸ್ ತಂಗುದಾಣಗಳನ್ನು ರಾಜ್ಯ ಸರ್ಕಾರವು ಸಿದ್ದರಾಮಯ್ಯ ಸರ್ಕಾರದ ಸಾಧನೆಗಳನ್ನು ಪ್ರಚಾರ ಮಾಡಲು ಬಿಬಿಎಂಪಿಗೆ ೬೮.೧೪ ಕೋಟಿ ರೂಪಾಯಿ ಶುಲ್ಕವನ್ನು ಪಾವತಿಸದೆ ದುರುಪಯೋಗಪಡಿಸಿಕೊಂಡಿದೆ ಎಂದು ಅರ್ಜಿ ಸಲ್ಲಿಸಲಾಗಿದೆ. ೨೦೧೫ ರಿಂದ ೨೦೧೬ ರವರೆಗೆ ಸಿದ್ದರಾಮಯ್ಯ ಸರ್ಕಾರ ಬಿಬಿಎಂಪಿಯ ೪೯೩ ಬಸ್ ತಂಗುದಾಣಗಳನ್ನು ಪ್ರಚಾರ ಕಾರ್ಯಕ್ಕೆ ಬಳಸಿಕೊಂಡಿದ್ದು, ಜಾಹೀರಾತು ಶುಲ್ಕ ನೀಡದೆ ಇರುವುದರಿಂದ ಎಸಿಬಿ ಮತ್ತು ಲೋಕಾಯುಕ್ತಕ್ಕೆ ದೂರು ಸಲ್ಲಿಸಲಾಗಿದೆ ಎಂದು ಎನ್.ಆರ್. ರಮೇಶ್ ತಿಳಿಸಿದ್ದಾರೆ.

**<><*<><>*><>**

ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿರುವ ಪರಿಭಾವಿತ ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಕೃಷಿ ಚಟುವಟಿಕೆಗಳನ್ನು ಈಗಾಗಲೇ ಕೈಗೊಳ್ಳುತ್ತಿರುವ ಜಮೀನು ಜಂಟಿ ಸಮೀಕ್ಷೆ ಆಗಿ ತೀರ್ಮಾನ ಆಗುವವರೆಗೂ ಅಲ್ಲಿನ ರೈತರನ್ನು ಒಕ್ಕಲೆಬ್ಬಿಸುವ ಕೆಲಸವನ್ನು ಮಾಡಬಾರದು ಎಂದು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಸೂಚನೆ ನೀಡಿದ್ದಾರೆ. ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿರುವ ಅವರು, ಜಿಲ್ಲೆಯ ಪರಿಭಾವಿತ ಅರಣ್ಯ ಪ್ರದೇಶದ ಬಗ್ಗೆ ಸ್ಥಳೀಯವಾಗಿ ರೈತರಿಂದ ದೂರುಗಳಿವೆ. ಹಲವು ವರ್ಷಗಳಿಂದ ಕೃಷಿ ಚಟುವಟಿಕೆಗಳನ್ನು ನಡೆಸಿಕೊಂಡು ಬರುತ್ತಿದ್ದು, ಭೂಮಿಯ ಮಾಲೀಕತ್ವದ ದಾಖಲೆಗಳನ್ನು ಹೊಂದಿದ್ದರೂ ಸಹ ಪಹಣಿಯಲ್ಲಿ ಪರಿಭಾವಿತ ಅರಣ್ಯ ಪ್ರದೇಶವೆಂದು ನಮೂದಾಗಿದೆ. ಈ ಹಿನ್ನೆಲೆಯಲ್ಲಿ ಕಂದಾಯ ಇಲಾಖೆ, ಅರಣ್ಯ ಇಲಾಖೆ ಮತ್ತಿತರ ಇಲಾಖೆಗಳ ಸಹಯೋಗದಲ್ಲಿ ಜಂಟಿ ಸಮೀಕ್ಷೆ ನಡೆಯುತ್ತಿದ್ದು, ಈ ಸಮೀಕ್ಷೆಯ ವರದಿಗಳು ಬಂದ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**